**All India Radio: Bangalore**
**Regional Bulletin In Kannada**
**07.02.2026 / 2.30 p.m.**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><><><>**

ಮುಖ್ಯಾಂಶಗಳು

1. ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ತೀವ್ರ ಪ್ರಗತಿ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್
2. ಕೇಂದ್ರ ಬಜೆಟ್ ನಲ್ಲಿ ರಾಜ್ಯದ ತೆರಿಗೆ ಪಾಲಿನ ಕಡಿತ ಇಲ್ಲ-ಕೇಂದ್ರ ಸಚಿವ ವಿ. ಸೋಮಣ್ಣ ಸ್ಪಷ್ಟನೆ
3. ಸುಗಮ ಕಲಾಪಕ್ಕೆ ಶಾಸಕರ ಜವಾಬ್ದಾರಿ ಮಹತ್ವದು -ಸ್ಪೀಕರ್ ಯು.ಟಿ.ಖಾದರ್
4. ರಾಜ್ಯದಲ್ಲಿ ಆರೋಗ್ಯ, ವೈದ್ಯಕೀಯ ಶಿಕ್ಷಣ ಬಲವರ್ಧನೆಗೆ ಕ್ರಮ

<><><><>

ಕೇಂದ್ರ ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಇಂದು ಬೆಂಗಳೂರಿನಲ್ಲಿ ತಂತ್ರಜ್ಞಾನ, ಸಂಶೋಧನೆ, ವಿನ್ಯಾಸ, ಅಭಿವೃದ್ಧಿ ಮತ್ತು ಉತ್ಪಾದನೆ ಘಟಕಗಳಿಗೆ ಭೇಟಿ ನೀಡಿದರು. ಕ್ವಾಲ್‌ಕಾಲ್ ಸಂಸ್ಥೆಯ ಎರಡು ನ್ಯಾನೋ ಮೀಟರ್ ಚಿಪ್ ವಿನ್ಯಾಸ ಮತ್ತು ಉತ್ಪಾದನಾ ಘಟಕಕ್ಕೆ ಭೇಟಿ ನೀಡಿ, ಅಲ್ಲಿನ ಉನ್ನತ ಸಿಬ್ಬಂದಿಯೊಂದಿಗೆ ಸಮಾಲೋಚನೆ ನಡೆಸಿದರು. ಬಳಿಕ, ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವರು, ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ವೇಗವಾಗಿ ಪ್ರಗತಿ ಸಾಧಿಸುತ್ತಿದ್ದು, ೨೦೨೦ರಲ್ಲಿ ಸೆಮಿಕಂಡಕ್ಟರ್ ಕ್ಷೇತ್ರದ ಕಂಪನಿಗಳು ಭಾರತಕ್ಕೆ ಆಗಮಿಸಿ ಪ್ರಾಥಮಿಕ ಹಂತದ ಉತ್ಪನ್ನ ತಯಾರಿಕೆಯಲ್ಲಿ ನಿರತವಾಗಿವೆ. ಬರುವ ದಿನಗಳಲ್ಲಿ ೭ ನ್ಯಾನೋ ಮೀಟರ್ ಚಿಪ್ ತಯಾರಿಕೆ ಮತ್ತು ಸ್ಲ್ಯಾಬ್ ತಯಾರಿಕೆಗೆ ಭಾರತ ದಾಪುಗಾಲು ಹಾಕಲಿದೆ ಎಂದರು. ಅಮೆರಿಕದೊಂದಿಗೆ ವ್ಯಾಪಾರ ಒಪ್ಪಂದವೇರ್ಪಟ್ಟ ನಂತರ ತಂತ್ರಜ್ಞಾನ ಕ್ಷೇತ್ರದಲ್ಲಿ ಭಾರತ ಮತ್ತಷ್ಟು ಪ್ರಗತಿ ಸಾಧಿಸಲಿದ್ದು, ವಿಶ್ವಕ್ಕೆ ಅಗತ್ಯ ಚಿಪ್ ತಯಾರಿಸುವಲ್ಲಿ ಪ್ರಮುಖವಾದ ಪಾತ್ರ ವಹಿಸಲಿದೆ ಎಂದು ತಿಳಿಸಿದರು. ಇಂದು ದೇಶದಲ್ಲಿ ೩೫೦ಕ್ಕೂ ಹೆಚ್ಚು ವಿಶ್ವವಿದ್ಯಾಲಯಗಳು ಕೃತಕಬುದ್ಧಿಮತ್ತೆ ಮತ್ತು ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಕಂಪನಿಗಳು ಮತ್ತು ಸರ್ಕಾರದೊಂದಿಗೆ ಕೈಜೋಡಿಸಿದ್ದು, ಸಂಶೋಧನಾ ಕೆಲಸದಲ್ಲಿ ನಿರತವಾಗಿವೆ ಎಂದು ಸಚಿವರು ಮಾಹಿತಿ ನೀಡಿದರು.

<><><><>

ಇತ್ತೀಚೆಗೆ ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಮಂಡಿಸಿದ ೨೦೨೬-೨೭ನೇ ಸಾಲಿನ ಬಜೆಟ್ ನಲ್ಲಿ ರಾಜ್ಯದ ತೆರಿಗೆ ಪಾಲಿನಲ್ಲಿ ಕಡಿತಗೊಳಿಸಲಾಗಿಲ್ಲ. ೧೫ನೆಯ ಹಣಕಾಸಿನ ಆಯೋಗಕ್ಕಿಂತ ಹೆಚ್ಚಿಗೆ ನೀಡಲಾಗಿದೆ ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಮೊದಲು ಇದ್ದ ಶೇಕಡ ೩.೫ರ ತೆರಿಗೆ ಪಾಲನ್ನು ೧೬ನೇ ಹಣಕಾಸಿನ ಆಯೋಗದಲ್ಲಿ ಶೇಕಡ ೪.೧೩ ಕ್ಕೆ ಹೆಚ್ಚಿಸಲಾಗಿದೆ. ರಾಜ್ಯದಲ್ಲಿ ಕೈಮಗ್ಗ, ಕರಕುಶಲ, ಪರಿಸರ ಸ್ನೇಹಿ ಸರಕುಸಾಗಣಿಕೆ, ಮೀನುಗಾರಿಕೆ, ಹೈನುಗಾರಿಕೆ, ತೆಂಗು ಉತ್ಪಾದನೆಗೆ ಆದ್ಯತೆ ನೀಡಲಾಗಿದೆ. ೧೫ ಸಾವಿರ ಮಾಧ್ಯಮಿಕ ಶಾಲೆಗಳ ಪ್ರಾರಂಭಿಸಲು ಉದ್ದೇಶಿಸಲಾಗಿದೆ ಎಂದರು. ರೈಲ್ವೆ ಅಭಿವೃದ್ಧಿಗೆ ೧ ಲಕ್ಷದ ೧೩ ಸಾವಿರ ಕೋಟಿ ರೂಪಾಯಿ ಮೀಸಲಿಡಲಾಗಿದೆ. ಇದರಲ್ಲಿ ೧೦ ಸಾವಿರ ರೈಲು ಬೋಗಿಗಳ ಬದಲಾವಣೆ ಮಾಡಲಾಗುತ್ತಿದ್ದು, ಇದಕ್ಕಾಗಿ ೬೫ ಸಾವಿರದ ೪೯೬ ಕೋಟಿ ರೂಪಾಯಿಗಳನ್ನು ಮೀಸಲಿಡಲಾಗಿದೆ. ಸ್ಲೀಪರ್ ಕೋಚ್ ಹೊಂದಿದ ಮೂರು ಹೊಸ ವಂದೇ ಭಾರತ ರೈಲು ಸಂಚಾರ ಆರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.

(ಧ್ವನಿ-ಸೋಮಣ್ಣ ೪೦ ಸೆಕೆಂಡ್‌ಗಳು)

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ವತಿಯಿಂದ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಎಂಎಸ್‌ಐಎಲ್ ಚಿಟ್ಸ್‌ನ ಹೊಸ ಸಾಫ್ಟ್‌ವೇರ್ ಹಾಗೂ ಮೊಬೈಲ್ ಆಪ್ ಅನ್ನು ಬಿಡುಗಡೆಗೊಳಿಸಿದರು. ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್, ಶಾಸಕರು ಹಾಗೂ ಎಂಎಸ್‌ಐಎಲ್‌ನ ಅಧ್ಯಕ್ಷ ಸಿ.ಪುಟ್ಟರಂಗಶೆಟ್ಟಿ, ಸರ್ಕಾರದ ಮುಖ್ಯಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಮತ್ತಿತರರು ಉಪಸ್ಥಿತರಿದ್ದರು.

<><><>

ಉತ್ತರ ಕರ್ನಾಟಕದ ಪ್ರಮುಖ ಸಮಸ್ಯೆಯಾಗಿದ್ದ ಬೆಣ್ಣೆಹಳ್ಳದ ಪ್ರವಾಹ ತಡೆಯುವ ಉದ್ದೇಶದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಭೂಮಿಪೂಜೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ ಎಂದು ಶಾಸಕ ಎನ್.ಹೆಚ್.ಕೋನರೆಡ್ಡಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೧೦ ರಲ್ಲಿ ನೀರಾವರಿ ತಜ್ಞ

ಪರಮಶಿವಯ್ಯ ಸಮಿತಿ ಬೆಣ್ಣೆಹಳ್ಳ, ತುಪ್ಪರಿಹಳ್ಳದಿಂದ ಉಂಟಾಗುವ ಪ್ರವಾಹ ನಿಯಂತ್ರಿಸಲು ಅಧ್ಯಯನ ನಡೆಸಿ ಸರ್ಕಾರಕ್ಕೆ ವರದಿ ನೀಡಿತ್ತು. ಆದರೆ ಈ ವರದಿ ಅನುಷ್ಠಾನ ಆಗಿರಲಿಲ್ಲ, ಇದೀಗ ಮುಖ್ಯಮಂತ್ರಿ ಸಿದ್ದರಾಮಯ್ಯ ಮೊದಲ ಹಂತದಲ್ಲಿ ೨೦೦ ಕೋಟಿ ರೂಪಾಯಿ ಬಿಡುಗಡೆಗೆ ಒಪ್ಪಿಗೆ ಸೂಚಿಸಿದ್ದಾರೆ ಎಂದರು. ಕಾಮಗಾರಿ ಟೆಂಡರ್ ಪ್ರಕ್ರಿಯೆ ಮುಗಿದಿದ್ದು, ಕುಂದಗೋಳ ತಾಲೂಕಿನ ಯರೇನಾರಾಯಣಪುರದಿಂದ ಕಾಮಗಾರಿ ಆರಂಭಿಸಲು ತೀರ್ಮಾನ ಕೈಗೊಳ್ಳಲಾಗಿದೆ. ಬೆಣ್ಣೆಹಳ್ಳದ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಕಾಮಗಾರಿ ಆರಂಭಿಸಲಾಗುತ್ತಿದೆ ಎಂದು ತಿಳಿಸಿದರು. ಅಮೃತ ಯೋಜನೆಯಲ್ಲಿ ಕೆರೆ ತುಂಬಿಸುವ ಕೆಲಸ, ನವಲಗುಂದ ಪಟ್ಟಣದ ಒಳಚರಂಡಿ ಕಾಮಗಾರಿ, ಅಣ್ಣಿಗೇರಿ, ನವಲಗುಂದ ಪಟ್ಟಣಗಳ ಆಡಳಿತ ಕಛೇರಿಗಳ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಭೂಮಿಪೂಜೆ ನಡೆಯಲಿದೆ ಎಂದರು.

<><><>

ಶಾಸಕರು ತಮ್ಮ ಜಬಾಬ್ದಾರಿ ಅರಿತು ನಡೆದುಕೊಂಡಾಗ ಕಲಾಪ ಸುಗಮವಾಗಿ ಸಾಗಲು ಸಾಧ್ಯವಾಗುತ್ತದೆ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಶಾಸಕರು ಸ್ವಯಂ ಪ್ರೇರಿತವಾಗಿ ಆತ್ಮಾವಲೋಕನ ಮಾಡಿಕೊಳ್ಳಬೇಕು. ಶಾಸಕರ ಗೌರವವನ್ನು ಉಳಿಸಬೇಕು. ಜನ ಎಲ್ಲವನ್ನೂ ಗಮನಿಸುತ್ತಿರುತ್ತಾರೆ ಎಂದರು. ಸದನದಲ್ಲಿ ಶಾಸಕ ಶಿವಲಿಂಗೇಗೌಡ ಮತ್ತು ಶರಣು ಸಲಗಾರ್ ನಡುವಿನ ಮಾತಿನ ಚಕಮಕಿಯಂತಹ ಘಟನೆಗಳು ಹಿಂದೆಯೂ ಆಗಿವೆ. ಅಭಿವೃದ್ಧಿ ಚರ್ಚೆಗಳಾಗಬೇಕಾದ ಸದನದಲ್ಲಿ ಇಂತಹ ಗಲಾಟೆಗಳು ನಡೆಯಬಾರದು. ಸದನ ಕುಟುಂಬ ಇದ್ದಂತೆ ಎಲ್ಲವನ್ನು ಬಗೆಹರಿಸಿಕೊಂಡು ಹೋಗುವುದೇ ಸದನದ ಸಂಸ್ಕೃತಿ ಎಂದರು. ೨೨೪ ಶಾಸಕರಲ್ಲಿ ಕೆಲವು ಶಾಸಕರ ವರ್ತನೆ ಮಾತ್ರ ಈ ರೀತಿ ಇರುತ್ತದೆ. ಸದನದಲ್ಲಿ ಎಲ್ಲರಿಗೂ ಜವಾಬ್ದಾರಿಗಳಿವೆ. ಮುಂದೆ ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಸಲಹೆ ನೀಡಿದರು.

<><><>

ರಾಜ್ಯದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಸರ್ಕಾರ ಹಲವು ಕ್ರಮಗಳನ್ನು ಕೈಗೊಂಡಿರುವುದಾಗಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಹೇಳಿದರು.

ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಮನಗರ, ಕನಕಪುರ ಹಾಗೂ ಬಾಗಲಕೋಟೆಗಳಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜುಗಳನ್ನು ಸ್ಥಾಪಿಸುವ ಯೋಜನೆ ಸರ್ಕಾರದ ಮುಂದಿದ್ದು, ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು. ವೈದ್ಯಕೀಯ ಶಿಕ್ಷಣ ಇಲಾಖೆ ಮೂಲಕ ಬಡವರು, ಕೂಲಿ ಕಾರ್ಮಿಕರ ಮಕ್ಕಳು ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳು ವೈದ್ಯಕೀಯ ಶಿಕ್ಷಣ ಪಡೆದು ಡಾಕ್ಟರ್ ಆಗುವ ಅವಕಾಶ ಕಲ್ಪಿಸುವುದೇ ಸರ್ಕಾರದ ಗುರಿಯಾಗಿದೆ ಎಂದರು. ಯಾದಗಿರಿ ಮೆಡಿಕಲ್ ಕಾಲೇಜಿಗೆ ಅಗತ್ಯವಿರುವ ಸಿಬ್ಬಂದಿ ನೇಮಕಾತಿಗೆ ಟೆಂಡರ್ ಪ್ರಕ್ರಿಯೆ ಆರಂಭಿಸಲಾಗಿದೆ. ನಿಯಮಾನುಸಾರ ಹೊರಗುತ್ತಿಗೆ ಆಧಾರದಲ್ಲಿ ಹುದ್ದೆಗಳ ಭರ್ತಿಗೆ ಸೂಚನೆ ನೀಡಲಾಗಿದೆ. ಹುಬ್ಬಳ್ಳಿಯಲ್ಲಿ ಜಯದೇವ ಹೃದ್ರೋಗ ಸಂಸ್ಥೆಯ ನೂತನ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಲೋಕಾರ್ಪಣೆಗೊಳ್ಳಲಿದೆ ಎಂದು ಅವರು ತಿಳಿಸಿದರು.

<><><><>

ಗ್ರಾಮ ಪಂಚಾಯಿತಿಗಳು ಸ್ಥಳೀಯ ಸಾರ್ವಜನಿಕರ ಸಮಸ್ಯೆ ಆಲಿಸಿ ಅವುಗಳನ್ನು ಬಗೆಹರಿಸುವ ಕೇಂದ್ರಗಳಾಗಬೇಕು ಎಂದು ಮೀನುಗಾರಿಕೆ ಸಚಿವ ಮಂಕಾಳ ವೈದ್ಯ ಹೇಳಿದ್ದಾರೆ. ಉತ್ತರ ಕನ್ನಡ ಜಿಲ್ಲೆ ಕುಮಟಾ ತಾಲೂಕಿನ ಹಿರೇಗುತ್ತಿ ಗ್ರಾಮ ಪಂಚಾಯತ್‌ನ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ಪಂಚಾಯಿತಿ ಮೂಲಕ ಹಲವು ಸೇವೆಗಳನ್ನು ನೀಡುತ್ತಿದೆ. ಸಮಸ್ಯೆ ಪರಿಹಾರಕ್ಕೆ ಆಗಮಿಸುವ ಸಾರ್ವಜನಿಕರೊಂದಿಗೆ ಅಧಿಕಾರಿಗಳು ತಾಳ್ಮೆಯಿಂದ ಸ್ಪಂದಿಸಬೇಕು ಎಂದರು. ಕಾರ್ಯಕ್ರಮದಲ್ಲಿ ಶಾಸಕ ದಿನಕರ ಶೆಟ್ಟಿ ಮತ್ತಿತರರು ಉಪಸ್ಥಿತರಿದ್ದರು.

<><><><>

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾನಿಲಯದಡಿಯಲ್ಲಿನ ಎಲ್ಲಾ ೧ ಸಾವಿರದ ೫೦೦ ಕಾಲೇಜುಗಳಿಗೂ ಮಾದಕ ಮುಕ್ತ ಕ್ಯಾಂಪಸ್ ಘೋಷಣೆ ಕಡ್ಡಾಯವಾಗಿದೆ ಎಂದು ವಿಶ್ವವಿದ್ಯಾನಿಲಯದ ಕುಲಪತಿ ಡಾ.ಬಿ.ಸಿ.ಭಗವಾನ್ ಹೇಳಿದ್ದಾರೆ. ಮಡಿಕೇರಿಯಲ್ಲಿಂದು ನಶಾ ಮುಕ್ತ ಭಾರತ ವಾಕಥಾನ್ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ದೇಶದ ಪ್ರತಿ ವೈದ್ಯಕೀಯ ಶಿಕ್ಷಣ ಸಂಬಂಧಿತ ಕಾಲೇಜುಗಳಲ್ಲಿಯೂ ವಿದ್ಯಾರ್ಥಿಗಳು ಮಾದಕ ವ್ಯಸನಿಗಳಾಗಿದ್ದಾರೆಯೇ ಎಂಬುದನ್ನು ಪತ್ತೆ ಹಚ್ಚಲು ಕಾರ್ಯಪಡೆ ರಚಿಸಲಾಗಿದೆ. ಈ ಕಾರ್ಯಪಡೆ ಪ್ರತೀ ೩ ತಿಂಗಳಿಗೊಮ್ಮೆ ತನಿಖಾ ವರದಿ ನೀಡಬೇಕಾಗಿದೆ ಎಂದು ಮಾಹಿತಿ ನೀಡಿದರು. ಶಾಸಕ

ಡಾ.ಮಂಥರ್ ಗೌಡ ಮಾತನಾಡಿ, ಯುವಜನತೆ ಮಾದಕ ದ್ರವ್ಯ ವ್ಯಸನಿಗಳಾಗದೇ ಉತ್ತಮ ಜೀವನಶೈಲಿ ಅಳವಡಿಸಿಕೊಳ್ಳುವಂತೆ ಕರೆ ನೀಡಿದರು.

<><><><>

ಹಾವೇರಿ ಜಿಲ್ಲಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ ತಿಳಿಸಿದ್ದಾರೆ. ಹಾವೇರಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ ವರ್ಷ ನಿಯಮ ಉಲ್ಲಂಘಿಸಿದ ೧ ಸಾವಿರದ ೩೦೦ಕ್ಕೂ ಅಧಿಕ ವಾಹನ ಚಾಲಕರಿಗೆ ದಂಡ ವಿಧಿಸಲಾಗಿದೆ. ಹೆದ್ದಾರಿಯಲ್ಲಿ ಭಾರಿ ವಾಹನಗಳು, ಚಲಿಸಲು ಮೂರು ಲೇನ್‌ಗಳನ್ನು ಗುರುತಿಸಲಾಗಿದೆ. ಆದರೆ, ಹಲವು ಮಂದಿ ನಿಯಮ ಪಾಲಿಸುತ್ತಿಲ್ಲ. ಇದರಿಂದ ಅಪಘಾತಗಳು ಹೆಚ್ಚುತ್ತಿವೆ ಎಂದರು.

ರಸ್ತೆ ಸಂಚಾರ ನಿಯಮ ಕುರಿತು ಚಳಗೇರಿ ಹಾಗೂ ಬಂಕಾಪುರ ಟೋಲ್ ಪ್ಲಾಜಾಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ವಾಹನಗಳಿಗೆ ಸ್ಟಿಕರ್ ಅಂಟಿಸಿ ಅರಿವು ನೀಡಲಾಗುತ್ತಿದೆ ಎಂದು ತಿಳಿಸಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>